ಅ) ಈ ಯೋಜನೆಯಡಿ ಪ್ರಗತಿಯನ್ನು ತ್ವರಿತಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ ಹಾಗೂ ಯೋಜನೆಯ ಅವಧಿ ವಿಸ್ತರಣೆಗಾಗಿ ಕೇಂದ್ರ ಸರ್ಕಾರವನ್ನು ಕೋರಲು ಉದ್ದೇಶಿಸಲಾಗಿದೆ.

ಇ) ಪ್ರಗತಿ ಆಧರಿಸಿ ಕೇಂದ್ರ ಸರ್ಕಾರವು ನಿರ್ಧರಿಸುತ್ತದೆ.

ಈ) ಬಂದಿದೆ.

ಉ) ಜಿಲ್ಲಾ ಮಟ್ಟದಲ್ಲಿ ಈ ಯೋಜನೆಯಡಿಯಲ್ಲಿ ರಚಿಸಿರುವ ಸಮಿತಿಯಲ್ಲಿ ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳಿಗೆ ನಿಗದಿತ ಅವಧಿಯೊಳಗೆ ವಿದ್ಯುತ್ ಸಂಪರ್ಕ ಒದಗಿಸುವಂತೆ ಸೂಚಿಸಲಾಗಿದೆ.

ಮೈಸೂರು ಜಿಲ್ಲಾ ಜಿಲ್ಲಾ ಪಂಚಾಯತ್‌ನ ಸಾಮಾನ್ಯ ಸದಸ್ಯರಾದ ಶಾಸಕರಿಗೆ ವಿವಿಧ ಶೀರ್ಷಿಕೆಗಳಲ್ಲಿ ಅನುದಾನ ಬಿಡುಗಡೆ

223 (571) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) - ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಜಿಲ್ಲಾ ಪಂಚಾಯ್ತಿಗಳಲ್ಲಿ ವಿವಿಧ ಯೋಜನೆಗಳಿಗೆ ಹಣ ಬಿಡುಗಡೆ ಮಾಡಲು ಅನುಸರಿಸುವ ಮಾನದಂಡ ಯಾವುದು ;

ಆ) ಮೈಸೂರು ಜಿಲ್ಲಾ ಪಂಚಾಯತ್‌ನಲ್ಲಿ ಜಿಲ್ಲಾ ಪಂಚಾಯತ್‌ನ ಸಾಮಾನ್ಯ ಸದಸ್ಯರಾದ ವಿಧಾನ ಸಭಾ ಸದಸ್ಯರಿಗೆ 2002-2003ನೇ ಸಾಲಿನಲ್ಲಿ ವಿವಿಧ ಶೀರ್ಷಿಕೆಗಳಲ್ಲಿ ಎಷ್ಟು ಅನುದಾನ ನೀಡಲಾಗಿದೆ ; ಶೀರ್ಷಿಕೆ 3054 ರಲ್ಲಿ ಹಣವನ್ನು ಯಾವ ಆಧಾರದ ಮೇಲೆ ಬಿಡುಗಡೆ ಮಾಡಲಾಗಿದೆ ;

ಇ) ಶೀರ್ಷಿಕೆವಾರು ಮಾಹಿತಿ ನೀಡುವುದು ;

ಈ) ಅನುದಾನ ನೀಡದಿದ್ದಲ್ಲಿ ಕಾರಣಗಳೇನು ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಜಿಲ್ಲಾ ಪಂಚಾಯತ್‌ನಿಂದ ಅನುಮೋದಿತ ಕ್ರಿಯಾ ಯೋಜನೆಯಂತೆ ಹಾಗೂ ಎಂ.ಎಂ.ಆರ್. ಪ್ರಕಾರ ಕಾಲಕಾಲಕ್ಕೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ಆ) ಮೈಸೂರು ಜಿಲ್ಲಾ ಪಂಚಾಯತಿಯಲ್ಲಿ 2002-2003ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿಯ ಸಾಮಾನ್ಯ ಸದಸ್ಯರಾದ ವಿಧಾನಸಭಾ ಸದಸ್ಯರಿಗೆ ಪ್ರತ್ಯೇಕವಾಗಿ ಅನುದಾನ ನೀಡಲು ಅವಕಾಶವಿರುವುದಿಲ್ಲ.

ಶೀರ್ಷಿಕೆ 3054 ರಲ್ಲಿ ಯೋಜನೆಯಡಿ ಎಂ.ಎಂ.ಆರ್. ಪ್ರಕಾರ ಅನುದಾನ ಬಿಡುಗಡೆ ಮಾಡಲಾಗಿದೆ.

ಇ) ಮೇಲಿನ 'ಆ' ಕ್ಕೆ ನೀಡಿದ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲಾ.

ಈ) ಮೇಲಿನ 'ಆ' ಕ್ಕೆ ನೀಡಿದ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲಾ.

ಧಾರವಾಡದಲ್ಲಿ ಆರ್ಟ್ ಗ್ಯಾಲರಿ ನಿರ್ಮಾಣ

224 (472) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) - ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವೆಯರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡದಲ್ಲಿ ಚಿತ್ರ ಶಾಲೆ ಪ್ರಾರಂಭಗೊಂಡಿದೆಯೇ? ಯಾವಾಗಿನಿಂದ? ಯಾರು ಸ್ಥಾಪಿಸಿದರು?

ಆ) ಸರ್ಕಾರವು ಆ ಚಿತ್ರ ಕಲಾವಿದರಿಗೆ ಪ್ರತಿಷ್ಠಿತ ವೆಂಕಟಪ್ಪ ಪ್ರಶಸ್ತಿ ನೀಡಿರುವುದು ನಿಜವೇ?

ಇ) ನಿಜವಿದ್ದಲ್ಲಿ, ಪ್ರಶಸ್ತಿ ನೀಡಿದ ಡಿ.ವಿ. ಹಾಲಭಾವಿ ಇವರ ಹೆಸರಿನಲ್ಲಿ (ಚಿತ್ರ ಪ್ರದರ್ಶನದ) ಆರ್ಟ್ ಗ್ಯಾಲರಿ ನಿರ್ಮಿಸುವ ಯೋಜನೆ ಯಾವ ಹಂತದಲ್ಲಿದೆ.

ಈ) ಯಾವಾಗ ಕಾರ್ಯ ಅನುಷ್ಠಾನಗೊಳಿಸಲಾಗುತ್ತದೆ? (ವಿವರ ನೀಡುವುದು)

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವರು)

ಅ) 1) ಪ್ರಾರಂಭವಾಗಿದೆ

2) 1935ರಲ್ಲಿ ಸ್ಥಾಪಿಸಿದೆ

3) ಶ್ರೀ ಡಿ.ವಿ. ಹಾಲಭಾವಿಯವರು, ಹೆಸರಾಂತ ಕಲಾವಿದರು, ವೆಂಕಟಪ್ಪ ಪ್ರಶಸ್ತಿ ವಿಜೇತರು. (ಹಾಲಭಾವಿ ಸ್ಕೂಲ್ ಆಫ್ ಆರ್ಟ್ ಧಾರವಾಡ)

ಆ) ಹೌದು

ಇ) ಹಾಲಭಾವಿಯವರ ಹೆಸರಿನಲ್ಲಿ ಆರ್ಟ್ ಗ್ಯಾಲರಿ ನಿರ್ಮಿಸುವ ಯೋಜನೆ ಸರ್ಕಾರದಲ್ಲಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಐ.ಐ.ಟಿ. ಪ್ರಾರಂಭಿಸುವ ಬಗ್ಗೆ

225 (474) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) - ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡದ ಕರ್ನಾಟಕ ವಿಶ್ವವಿದ್ಯಾನಿಲಯದಲ್ಲಿ ಐ.ಐ.ಟಿ. ಪ್ರಾರಂಭಿಸುವ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ;

ಆ) ಕರ್ನಾಟಕ ವಿಶ್ವ ವಿದ್ಯಾನಿಲಯದಲ್ಲಿ ರಾಷ್ಟ್ರದ ಮುಂದಿನ ಆಗತ್ಯಗಳ ಅಭ್ಯರ್ಥಿಗಳನ್ನು ತರಬೇತಿಗೊಳಿಸಲು ಯಾವ ಹೊಸ ವಿಷಯಗಳನ್ನು ಪ್ರಾರಂಭಿಸುವ ಯೋಜನೆ ಇದೆಯೇ ;

ಇ) ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಯಾವ ವಿಷಯಗಳನ್ನು ಕಡಿಮೆ ಮಾಡುವ ಯೋಜನೆ ಸರ್ಕಾರಕ್ಕೆ ಇದೆ?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಸಧ್ಯಕ್ಕೆ ಇಲ್ಲ

ಇ) ಇಲ್ಲ

ಧಾರವಾಡದ ವಿಧಾನಸಭಾ ಕ್ಷೇತ್ರದಲ್ಲಿರುವ ಖಾಸಗಿ ಮಾಧ್ಯಮಿಕ ಶಾಲೆಗಳು

226 (475) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡ ಮತಕ್ಷೇತ್ರದಲ್ಲಿ ಇರುವ ಖಾಸಗಿ ಮಾಧ್ಯಮಿಕ ಶಾಲೆಗಳು ಎಷ್ಟು ; (ವಿವರ ಒದಗಿಸುವುದು) ;